ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆ ಪಡೆದುಕೊಂಡು ಭೂಮಿ ಕುರಿತು

ಶ್ರೀ ಹೆಚ್. ಎಂ. ರಮೇಶ್‌ಗೌಡ(ವಿಧಾನಸಭೆಯಿಂದ ಚುನಾಯಿತರಾದವರು) –

1090 (1186) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆ ಪಡೆದುಕೊಂಡ ಭೂಮಿ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಅರಣ್ಯ ಇಲಾಖೆಯಿಂದ ಪಡೆದುಕೊಂಡ ಭೂಮಿಯನ್ನು ಕಂದಾಯ ಇಲಾಖೆ ಯಾವ ಉದ್ದೇಶಕ್ಕೆ ಮಾತ್ರ ಬಳಸಿಕೊಳ್ಳಬಹುದು; (ಸೂಕ್ತ ಮಾನದಂಡದ ಸಹಿತ ವಿವರ ನೀಡುವುದು)

(ಇ) ರಾಜ್ಯದ ತಾಲ್ಲೂಕು ಕಛೇರಿಗಳ ಭೂಮಿ ಕೇಂದ್ರಗಳಲ್ಲಿ ಸಾಫ್ಟ್‌ವೇರ್ ಸಮಸ್ಯೆಯಿಂದಾಗಿ ರೈತರ ಪಹಣಿ ಮತ್ತು ಬೆಳೆ ಎಂಟ್ರಿ ಸಮರ್ಪಕವಾಗಿ ನಡೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ರಾಜ್ಯದ ಎಲ್ಲಾ ತಾಲ್ಲೂಕು ಕಛೇರಿಗಳ ಭೂಮಿ ಕೇಂದ್ರದ ದಾಖಲೆಗಳ ಡಿಜಿಟಲೀಕರಣವನ್ನು ಖಾಸಗಿ ಸಂಸ್ಥೆಗೆ ವಹಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?